ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

12

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ ([illegible])

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 26/6/2020

# ಮತ್ತೆ ಲಾಕ್‌ಡೌನ್ ಬೇಕಾಗಿಲ್ಲ

ಉ.ವಾ 26/6/20

## ಸಂಪುಟ ನಿರ್ಧಾರ । ಬಹಿರಂಗ ಹೇಳಿಕೆ ನೀಡದಂತೆ ಸೂಚನೆ

**ಬೆಂಗಳೂರು:** ಸಾರ್ವಜನಿಕ ವಲಯದಲ್ಲಿ ಆತಂಕಕ್ಕೆ ಕಾರಣವಾಗಿರುವ ಕೊರೊನಾ ಪ್ರಕರಣಗಳ ಹೆಚ್ಚಳ ಹಿನ್ನೆಲೆಯಲ್ಲಿ ಲಾಕ್‌ಡೌನ್ ಬೇಕೆ ಎನ್ನುವ ವಿಚಾರದಲ್ಲಿ ಸಾಕಷ್ಟು ಚರ್ಚೆ ನಡೆಸಿದ ರಾಜ್ಯ ಸಚಿವ ಸಂಪುಟ, ಬಹುತೇಕ 'ಬೇಡ' ಎಂಬ ನಿರ್ಧಾರಕ್ಕೆ ಬಂದಿದೆ.

ಸದ್ಯಕ್ಕೆ ಬೆಂಗಳೂರು ಸೇರಿ ರಾಜ್ಯಾದ್ಯಂತ ಲಾಕ್‌ಡೌನ್ ಮಾಡದಿರಲು ಮತ್ತು ಈ ಸಂಬಂಧ ಯಾವುದೇ ಸಚಿವರು ಬಹಿರಂಗವಾಗಿ ಏನೂ ಮಾತನಾಡದಂತೆ ಸಿಎಂ ಯಡಿಯೂರಪ್ಪ ಸೂಚನೆ ನೀಡಿದ್ದಾರೆ ಎಂದು ಹೇಳಲಾಗಿದೆ.

ಬೆಂಗಳೂರು ಸೇರಿದಂತೆ ರಾಜ್ಯದಲ್ಲಿ ಲಾಕ್‌ಡೌನ್ ಮಾಡುವ ಸಂಬಂಧ ಸಂಪುಟದಲ್ಲಿ ಚರ್ಚೆಯಾಗಿ ಕೆಲವರು ಆಕ್ಷೇಪ, ಕೆಲವರು ಸಹಮತ ವ್ಯಕ್ತಪಡಿಸಿದರು. ಜತೆಗೆ ಸರ್ಕಾರದಲ್ಲೇ ಗೊಂದಲ ಬೇಡ ಎಂದು ಕೆಲವರು ಅಸಮಾಧಾನ ವ್ಯಕ್ತಪಡಿಸಿದರು. ಹೀಗಾಗಿ, ಮುಖ್ಯಮಂತ್ರಿಯವರು ಮಧ್ಯಪ್ರವೇಶ ಮಾಡಿ ಆ ವಿಚಾರದಲ್ಲಿ ಯಾರೂ ಏನೂ ಮಾತನಾಡಬೇಡಿ ಎಂದು ತಾಕೀತು ಮಾಡಿದರು ಎಂದು ತಿಳಿದು ಬಂದಿದೆ.

➘ 6ನೇ ಪುಟಕ್ಕೆ

### 'ಕೃಷ್ಣಾ' ಸಿಬ್ಬಂದಿಗೂ ಸೋಂಕು



ಮುಖ್ಯಮಂತ್ರಿಗಳ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಭದ್ರತೆ ಹಾಗೂ ಸುರಕ್ಷತೆಗೆ ನಿಯೋಜನೆಗೊಂಡಿದ್ದ ನಾಲ್ಕು ಸಿಬ್ಬಂದಿಗೆ ಕೋವಿಡ್- 19 ವೈರಸ್ ದೃಢಪಟ್ಟಿರುವುದು ಆತಂಕಕ್ಕೆ ಕಾರಣವಾಗಿದೆ. ಎಲೆಕ್ಟ್ರಿಷಿಯನ್, ಅಗ್ನಿಶಾಮಕ ಸಿಬ್ಬಂದಿ ಹಾಗೂ ಇಬ್ಬರು ಪೊಲೀಸ್ ಸಿಬ್ಬಂದಿಯಲ್ಲಿ ಸೋಂಕು ದೃಢಪಟ್ಟಿದೆ. 'ಕೃಷ್ಣಾ'ದಲ್ಲಿ ನಿರ್ವಹಣೆ ಕಾರ್ಯಕ್ಕೆ ನಿಯೋಜನೆಗೊಂಡಿದ್ದ ಎಲೆಕ್ಟ್ರಿಷಿಯನ್‌ಗೆ ಜ್ವರ ಕಾಣಿಸಿಕೊಂಡಿತ್ತು. ಈ ಹಿನ್ನೆಲೆಯಲ್ಲಿ ಕಳೆದ ಒಂದು ತಿಂಗಳಿನಿಂದ ಭದ್ರತೆ ಹಾಗೂ ಸುರಕ್ಷತಾ ಕಾರ್ಯಕ್ಕೆ ನಿಯೋಜನೆಗೊಂಡಿದ್ದ ಸುಮಾರು 500 ಮಂದಿಯ ಆರೋಗ್ಯ ತಪಾಸಣೆ ನಡೆಸಲಾಗಿತ್ತು. ಈ ಪೈಕಿ ಅಗ್ನಿಶಾಮಕ ಸಿಬ್ಬಂದಿ, ಎಲೆಕ್ಟ್ರಿಷಿಯನ್, ಇಬ್ಬರು ಪೊಲೀಸ್ ಸಿಬ್ಬಂದಿಗೆ ಸೋಂಕು ದೃಢಪಟ್ಟಿದೆ. ಈ ನಾಲ್ಕು ಮಂದಿ ಕೆಲ ದಿನಗಳಿಂದ 'ಕೃಷ್ಣಾ'ಗೆ ಬಂದಿರಲಿಲ್ಲ. ಮುನ್ನೆಚ್ಚರಿಕೆ ಕ್ರಮವಾಗಿ 'ಕೃಷ್ಣಾ' ಆವರಣವನ್ನು ಸ್ಯಾನಿಟೈಸ್‌ಗೊಳಿಸಲಾಯಿತು.

# ಮತ್ತೆ ಲಾಕ್‌ಡೌನ್ ಬೇಕಾಗಿಲ್ಲ

ಉ.ವಾ 26/6/20

1ನೇ ಪುಟದಿಂದ ▶ ಆದರೆ, ಲಾಕ್‌ಡೌನ್ ವಿಚಾರದಲ್ಲಿ ಸಂಪುಟದಲ್ಲಿ ಯಾವುದೇ ಚರ್ಚೆಯಾಗಲಿಲ್ಲ ಎಂದು ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಮಾಧುಸ್ವಾಮಿ ಹೇಳಿದ್ದಾರೆ.

**ಇಂದು ಸರ್ವಪಕ್ಷ ಸಭೆ:** ಈ ಮಧ್ಯೆ, ಬೆಂಗಳೂರಿನಲ್ಲಿ ಮೂರು ದಿನಗಳಿಂದ ನಿತ್ಯ 100ಕ್ಕೂ ಹೆಚ್ಚು ಪ್ರಕರಣಗಳು ಪತ್ತೆಯಾಗುತ್ತಿರುವುದರಿಂದ ಲಾಕ್‌ಡೌನ್ ಹಾಗೂ ಕೊರೊನಾ ನಿಯಂತ್ರಣ ವಿಚಾರದಲ್ಲಿ ಚರ್ಚಿಸಲು ಖುದ್ದು ಮುಖ್ಯಮಂತ್ರಿ ಯಡಿಯೂರಪ್ಪ ಅವರು ಶುಕ್ರವಾರ ಸರ್ವಪಕ್ಷಗಳ ಶಾಸಕರ ಸಭೆ ಕರೆದಿದ್ದಾರೆ.

**ಸಚಿವರು, ಅಧಿಕಾರಿಗಳ ಜತೆ ಸಭೆ:** ರಾಜಧಾನಿಯಲ್ಲಿ ಕೋವಿಡ್- 19 ವೈರಸ್ ವ್ಯಾಪಕವಾಗಿ ಕಾಣಿಸಿಕೊಂಡಿರುವ ಹಿನ್ನೆಲೆಯಲ್ಲಿ ಗುರುವಾರ ಸಚಿವರು, ಅಧಿಕಾರಿಗಳೊಂದಿಗೆ ತುರ್ತು ಸಭೆ ನಡೆಸಿದ ಸಿಎಂ ಬಿ.ಎಸ್.ಯಡಿಯೂರಪ್ಪ ಅವರು ಸೋಂಕಿತರಿಗೆ ಸೂಕ್ತ ಚಿಕಿತ್ಸೆ ವ್ಯವಸ್ಥೆ ಕಲ್ಪಿಸುವಂತೆ ಸಚಿವರಿಗೆ ಸೂಚನೆ ನೀಡಿದರು. ಕೋವಿಡ್ ಸೋಂಕಿತರು ಚಿಕಿತ್ಸೆಗೆ ಕಾಯುವ ಸ್ಥಿತಿ ಎದುರಾಗಬಾರದು. ಸೋಂಕು ಪತ್ತೆ ಪರೀಕ್ಷಾ ವರದಿಯಲ್ಲಿ ಸೋಂಕು ದೃಢಪಟ್ಟ ನಂತರ ತ್ವರಿತವಾಗಿ ಅವರನ್ನು ಆಸ್ಪತ್ರೆಗೆ ದಾಖಲಿಸಲು ಕ್ರಮ ಕೈಗೊಳ್ಳಬೇಕು. ಸದ್ಯ 100 ಆ್ಯಂಬುಲೆನ್ಸ್‌ಗಳು ಲಭ್ಯವಿದ್ದು, ಅಗತ್ಯಕ್ಕೆ ತಕ್ಕಂತೆ ಹೆಚ್ಚುವರಿ ಆ್ಯಂಬುಲೆನ್ಸ್ ಬಳಸಬೇಕು. ಖಾಸಗಿ ಆಸ್ಪತ್ರೆಗಳೊಂದಿಗೆ ಸಭೆ ನಡೆಸಿ ಕೋವಿಡ್ ಚಿಕಿತ್ಸೆಗೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳುವಂತೆ ಸಚಿವರು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು.